ರೈಲು ಸಂಚಾರ ಸಹಜ ಸ್ಥಿತಿಗೆ

ದೆಹಲಿ: ಕೇಂದ್ರ ಸರ್ಕಾರದ 'ಅಗ್ನಿಪಥ' ಯೋಜನೆ ವಿರೋಧಿಸಿ ದೇಶದಾದ್ಯಂತ ನಡೆದ ಪ್ರತಿಭಟನೆಗಳು ಹಿಂಸಾಚಾರಕ್ಕೆ ತಿರುಗಿದ ಪರಿಣಾಮ ಕಳೆದ 5 ದಿನಗಳಿಂದ ಅಸ್ತವ್ಯಸ್ಥವಾಗಿದ್ದ ರೈಲು ಸಂಚಾರವು ಬುಧವಾರ ಸಹಜ ಸ್ಥಿತಿಗೆ ಮರಳಿದೆ. ಅಗ್ನಿಪಥ ಪ್ರತಿಭಟನೆಗಳಿಂದ ರೈಲು ಸಂಚಾರ ಸ್ಥಗಿತಗೊಂಡಿದ್ದ ಕಡೆಗಳ ಪೈಕಿ ಸಾಧ್ಯವಿರುವ ಕಡೆಗಳಲ್ಲಿ ರೈಲು ಸೇವೆ ಪುನರ್ ಆರಂಭಿಸುವಂತೆ ರೈಲ್ವೆ ವಲಯಗಳಿಗೆ ರೈಲ್ವೆ ಮಂಡಳಿ ಸೂಚಿಸಿದೆ. ಇದರಿಂದಾಗಿ ಬುಧವಾರ ರೈಲು ಸಂಚಾರವು ಸಾಮಾನ್ಯ ಸ್ಥಿತಿಗೆ ಮರಳಿದೆ. ಆದರೆ, ಅಸ್ಸಾಂನಲ್ಲಿ ಪ್ರವಾಹ ಪರಿಸ್ಥಿತಿಯಿಂದಾಗಿ ಬುಧವಾರ ಕೆಲವು ರೈಲುಗಳು ರದ್ದಾಗಿವೆ ಎಂದು ಅಧಿಕಾರಿಗಳು ತಿಳಿಸಿದರು. ಅಗ್ನಿಪಥ ಯೋಜನೆ ವಿರೋಧಿಸಿ ದೇಶದಾದ್ಯಂತ ನಡೆದ ಪ್ರತಿಭಟನೆ ವೇಳೆ ಪ್ರತಿಭಟನಕಾರರು, ರೈಲು ಬೋಗಿಗಳಿಗೆ ಬೆಂಕಿ ಹಚ್ಚಿದ್ದರು. ಅಲ್ಲದೆ, ರೈಲ್ವೆ ಇಲಾಖೆಗೆ ಸೇರಿದ ಆಸ್ತಿಗಳನ್ನು ಹಾನಿ ಮಾಡಿದ್ದರು. ಇದರಿಂದ ಪ್ರತಿ ದಿನ ಸರಾಸರಿ 400 ರೈಲುಗಳ ಸಂಚಾರ ರದ್ದಾಗಿತ್ತು. ಈ ಪ್ರತಿಭಟನೆಯಿಂದಾಗಿ ರೈಲ್ವೆ ಇಲಾಖೆಯ ಎಷ್ಟು ಪ್ರಮಾಣದ ಆಸ್ತಿಗೆ ಹಾನಿಯಾಗಿದೆ ಎಂದು ಅಂದಾಜಿಸಲಾಗಿಲ್ಲ. ಆದರೆ, ಪೂರ್ವ ಕೇಂದ್ರದ ರೈಲ್ವೆ ವಲಯದ ವ್ಯಾಪ್ತಿಯಲ್ಲಿ 60ಕ್ಕೂ ಹೆಚ್ಚು ಬೋಗಿಗಳು ಮತ್ತು 10 ಎಂಜಿನ್‌ಗಳು ಹಾನಿಗೀಡಾಗಿವೆ ಎಂದು ವಕ್ತಾರರು ತಿಳಿಸಿದ್ದಾರೆ.

ಮೈಸೂರಿನ ಎಂಜಿನಿಯರುಗಳ ಸಂಸ್ಥೆಯಲ್ಲಿ ಅನ್ವೇಷಣಾ ಸೇವಾ ಟ್ರಸ್ಟ್ ಬುಧವಾರ ಆಯೋಜಿಸಿದ್ದ ಡಿ.ದೇವರಾಜ ಅರಸು ಅವರ 40ನೇ ಪುಣ್ಯಸ್ಮರಣೆಯಲ್ಲಿ ಎಸ್.ಎನ್.ಸತ್ಯಪ್ರಕಾಶ್ ಅರಸ್, ವಿದುಷಿ ಡಾ.ವಿ.ಮಾಲಿನಿ, ಲೇಖಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಟಿ.ಪ್ರಭಾಕರ ಶೆಟ್ಟಿ, ಉದ್ಯಮಿ ಕೊಳ್ಕೆಬೈಲ್ ಗಣೇಶ್ ನಾರಾಯಣ ಹೆಗ್ಡೆ, ಜಯದೇವರಾಜೇ ಅರಸ್, ಅವರಿಗೆ 'ಧ್ವನಿಕೊಟ್ಟ ಧಣಿ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ದ್ರೌಪದಿ ಮುರ್ಮು ಶ್ರೇಷ್ಠ ರಾಷ್ಟ್ರಪತಿಯಾಗುತ್ತಾರೆ

ದೆಹಲಿ: ದ್ರೌಪದಿ ಮುರ್ಮು ಶ್ರೇಷ್ಠ ರಾಷ್ಟ್ರಪತಿಯಾಗಿರುತ್ತಾರೆ ಎಂಬ ವಿಶ್ವಾಸ ತಮಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ತೀವ್ರ ಕುತೂಹಲ ಕೆರಳಿಸಿರುವ ರಾಷ್ಟ್ರಪತಿ ಚುನಾವಣೆಗೆ ಬಿಜೆಪಿ ಅಧಿಕೃತವಾಗಿ ತನ್ನ ಅಭ್ಯರ್ಥಿ ಘೋಷಣೆ ಮಾಡಿದ್ದು, ಇದರ ಬೆನ್ನಲ್ಲೇ ಟ್ವೀಟ್ ಮಾಡಿರುವ ಪ್ರಧಾನಿ ಮೋದಿ , 'ಶ್ರೀಮತಿ ದ್ರೌಪದಿ ಮುರ್ಮು ಅವರು ಸಮಾಜ ಸೇವೆಗೆ ಮತ್ತು ಬಡವರು, ದೀನದಲಿತರು ಮತ್ತು ಅಂಚಿನಲ್ಲಿರುವವರ ಸಬಲೀಕರಣಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದಾರೆ. ಅವರು ಶ್ರೀಮಂತ ಆಡಳಿತಾತ್ಮಕ ಅನುಭವವನ್ನು ಹೊಂದಿದ್ದಾರೆ, ಅತ್ಯುತ್ತಮ ಗವರ್ನಟೋರಿಯಲ್ ಅಧಿಕಾರವನ್ನು ಹೊಂದಿದ್ದರು. ಅವರು ನಮ್ಮ ರಾಷ್ಟ್ರದ ಶ್ರೇಷ್ಠ ರಾಷ್ಟ್ರಪತಿಯಾಗುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ಟ್ವೀಟ್ ಮಾಡಿದ್ದಾರೆ. ಅಂತೆಯೇ ಲಕ್ಷಾಂತರ ಜನರು, ವಿಶೇಷವಾಗಿ ಬಡತನವನ್ನು ಅನುಭವಿಸಿದ ಮತ್ತು ಕಷ್ಟಗಳನ್ನು ಎದುರಿಸಿದವರು. ಅವರ ಜೀವನದಿಂದ ಹೆಚ್ಚಿನ ಶಕ್ತಿ ಪಡೆಯುತ್ತಾರೆ. ಮುರ್ಮು ಅವರು ನೀತಿ ವಿಷಯಗಳ ಬಗ್ಗೆ ಅವರ ತಿಳುವಳಿಕೆ, ಸಹಾನುಭೂತಿ ಸ್ವಭಾವವು ದೇಶಕ್ಕೆ ಹೆಚ್ಚು ಪ್ರಯೋಜನವನ್ನು ನೀಡುತ್ತದೆ ಎಂದು ಹೇಳಿದ್ದಾರೆ.

ಸಮಾಚಾರ ಸಣ್ಣದಲ್ಲ

ಯೂರೋಪ್ ಪ್ರವಾಸ ತೆರಳಿದ ಬಿಎಸ್‌ವೈ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಮ್ಮ ಕುಟುಂಬದ ಸದಸ್ಯರ ಜತೆ ಯುರೋಪ್ ಪ್ರವಾಸಕ್ಕೆ ತೆರಳಿದ್ದಾರೆ. ಮೊದಲಿಗೆ ಬ್ರಿಟನ್ ಭೇಟಿ ನೀಡಲಿರುವ ಅವರು, ಆ ಬಳಿಕ ಯುರೋಪಿನ ಇತರ ದೇಶಗಳಿಗೂ ಹೋಗಲಿದ್ದಾರೆ. ಬಿ.ವೈ. ವಿಜಯೇಂದ್ರ ಮತ್ತು ಕುಟುಂಬದ ಇತರ ಸದಸ್ಯರೂ ಬಿ.ಎಸ್.ವೈ ಜತೆಗಿದ್ದಾರೆ. ರಾಘವೇಂದ್ರ ಅವರು ಪ್ರವಾಸಕ್ಕೆ ಹೋಗಿಲ್ಲ. ಒಟ್ಟು 10 ದಿನಗಳ ಪ್ರವಾಸ ಇದಾಗಿದೆ ಎಂದು ಮೂಲಗಳು ಹೇಳಿವೆ.

ಶ್ಯಾಮನೂರುಗೆ ಕೋರ್ಟ್ ಸೂಚನೆ

ಬೆಂಗಳೂರು: ಪದಾಧಿಕಾರಿಯೊಬ್ಬರ ಸದಸ್ಯತ್ವ ರದ್ದುಗೊಳಿಸಿದ ಆರೋಪಕ್ಕೆ ಸಂಬಂಧಿಸಿದ ಸಿವಿಲ್ ದಾವೆಯಲ್ಲಿ, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಶಾಮನೂರು ಶಿವ ಶಂಕರಪ್ಪ ಅವರು ವಿಚಾರಣೆಗೆ ಖುದ್ದು ಹಾಜರಾಗುವಂತೆ ಸಿಟಿ ಸಿವಿಲ್ ಕೋರ್ಟ್ ಆದೇಶಿಸಿದೆ. ಈ ಸಂಬಂಧ ಬೆಂಗಳೂರು ಸಂಪಿಗೆ ಲೇಔಟ್‌ನ ಅಮರಜ್ಯೋತಿ ನಗರದ ನಿವಾಸಿ ಶಿವಕುಮಾರಸ್ವಾಮಿ (ಮಾಗಡಿ ಶಿವಕುಮಾರ್) ಸಲ್ಲಿಸಿದ್ದ ಅಸಲು ದಾವೆಯನ್ನು ಮಂಗಳವಾರ ವಿಚಾರಣೆ ನಡೆಸಿದ ನ್ಯಾಯಾಧೀಶ ಗೆರಾಲ್ಡ್ ರುಡಾಲ್ಫ್ ಮೆಂಡೋಂನ್ಸಾ ಅವರು ಶಿವಶಂಕರಪ್ಪನವರ ಖುದ್ದು ಹಾಜರಿಗೆ ಆದೇಶಿಸಿ, ವಿಚಾರಣೆಯನ್ನು ಜುಲೈ 11ಕ್ಕೆ ಮುಂದೂಡಿದ್ದಾರೆ. ವೀರಶೈವ ಮಹಾಸಭಾದ ಅಧ್ಯಕ್ಷರ ವಿರುದ್ಧ ಅಸಭ್ಯ ಪತ್ರ ಬಂದ ಪ್ರಕರಣದಲ್ಲಿ ಮಹಾಸಭಾದ ಸದಸ್ಯತ್ವದಿಂದ ತಮ್ಮನ್ನು ಕಿತ್ತುಹಾಕಲು ಕಾರ್ಯಕಾರಿ ಸಮಿತಿಯು 2014ರ ಆಗಸ್ಟ್ 28ರಂದು ಕೈಗೊಂಡಿರುವ ನಿರ್ಣಯ ವನ್ನು ರದ್ದುಗೊಳಿಸಬೇಕು ಮತ್ತು ಸದಸ್ಯತ್ವ ಪುನರ್ ಸ್ಥಾಪನೆಗೆ ಆದೇಶಿಸಬೇಕು' ಎಂದು ಅರ್ಜಿದಾರರು ಕೋರಿದ್ದಾರೆ.

ದೆಹಲಿ ಪ್ರತಿಭಟನೆಗೆ ಕೈ ಜೋಡಿಸಲು ಸೂಚನೆ

ದೆಹಲಿ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಜಾರಿ ನಿರ್ದೇಶನಾಲಯ (ಇ.ಡಿ) ಅಧಿಕಾರಿಗಳು ವಿಚಾರಣೆಗೆ ಒಳಪಡಿಸಿರುವುದನ್ನು ವಿರೋಧಿಸಿ ರಾಷ್ಟ್ರ ರಾಜಧಾನಿಯಲ್ಲಿ ಪಕ್ಷದ ನಾಯಕರು ಪ್ರತಿಭಟನೆ ನಡೆಸಿದ್ದಾರೆ. ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವಂತೆ ಎಲ್ಲ ರಾಜ್ಯದ ಕಾಂಗ್ರೆಸ್ ನಾಯಕರಿಗೆ ಹೈಕಮಾಂಡ್ ಕರೆ ನೀಡಿದೆ. ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿ ರಾಹುಲ್ ಗಾಂಧಿಯವರನ್ನು ಇ.ಡಿ ಅಧಿಕಾರಿಗಳು 5 ಬಾರಿ ವಿಚಾರಣೆಗೆ ಒಳಪಡಿಸಿದ್ದಾರೆ. ರಾಹುಲ್ ಗಾಂಧಿಯವರನ್ನು ವಿಚಾರಣೆಗೆ ಒಳಪಡಿಸಬಾರದು ಎಂದು ಒತ್ತಾಯಿಸಿ ಕಾಂಗ್ರೆಸ್ ನಾಯಕರು ಪ್ರತಿಭಟನೆ ಮುಂದುವರಿಸಿದ್ದರು. ಪಕ್ಷದ ಶಾಸಕರು, ಸಂಸದರು ಮತ್ತು ಮಾಜಿ ಶಾಸಕ, ಸಂಸದರು ಪ್ರತಿಭಟನೆಯಲ್ಲಿ ಕೈಜೋಡಿಸಿ ಎಂದು ಕಾಂಗ್ರೆಸ್ ಕೇಳಿಕೊಂಡಿದೆ.

ಇಬ್ಬರು ಅಧಿಕಾರಿಗಳ ಅಮಾನತು

ದೆಹಲಿ: ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಕಚೇರಿಯ ಉಪ ಕಾರ್ಯದರ್ಶಿ ಮತ್ತು ಇಬ್ಬರು ಉಪವಿಭಾಗಾಧಿಕಾರಿಗಳನ್ನು ಭ್ರಷ್ಟಾಚಾರದ ಆರೋಪದ ಮೇಲೆ ಅಮಾನತು ಮಾಡಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ. ಸಕ್ಸೇನಾ ಆದೇಶಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮುಖ್ಯಮಂತ್ರಿ ಕಚೇರಿಯ ಉಪ ಕಾರ್ಯದರ್ಶಿಯಾಗಿದ್ದ ಪ್ರಕಾಶ್ ಚಂದ್ರ ಠಾಕೂರ್, ವಸಂತ್ ವಿಹಾರ್‌ನ ಉಪ ವಿಭಾಗಾಧಿಕಾರಿ ಹರ್ಷಿತ್ ಜೈನ್ ಮತ್ತು ವಿವೇಕ್ ವಿಹಾರ್‌ನ ದೇವೇಂದ್ರ ಶರ್ಮಾ ಅವರನ್ನು ಅಮಾನತು ಮಾಡಲಾಗಿದೆ. ಮೂವರ ವಿರುದ್ಧವೂ ಶಿಸ್ತು ಕ್ರಮಕ್ಕೆ ಆದೇಶಿಸಲಾಗಿದೆ. ಕಲ್ಕಾಜಿ ಬಡಾವಣೆಯ ಇಡಬ್ಲ್ಯುಎಸ್ ಫ್ಲಾಟ್‌ಗಳ ನಿರ್ಮಾಣದಲ್ಲಿ ಲೋಪ ಕಂಡುಬಂದ ಹಿನ್ನೆಲೆಯಲ್ಲಿ ದೆಹಲಿ ಅಭಿವೃದ್ಧಿ ಪ್ರಾಧಿಕಾರದ ಇಬ್ಬರು ಸಹಾಯಕ ಎಂಜಿನಿಯರ್‌ಗಳನ್ನು ಲೆಫ್ಟಿನೆಂಟ್ ಗವರ್ನರ್ ಸೋಮವಾರ ಅಮಾನತು ಮಾಡಿದ್ದರು.

ಸ್ವಸಹಾಯ ಸಂಘಗಳಿಗೆ ಉತ್ತೇಜನ ನೀಡಲು ಒಡಂಬಡಿಕೆ

ಬೆಂಗಳೂರು: ಸ್ವಸಹಾಯ ಸಂಘಗಳ ಉದ್ಯಮಶೀಲ ಮಹಿಳೆಯರಿಗೆ ಮಾರುಕಟ್ಟೆ ಮತ್ತಿತರ ಉತ್ತೇಜನ ನೀಡಲು ಮತ್ತು ಸಾವಯವ ಕೃಷಿ ಸಂಬಂಧ ಅರಿವು ಮೂಡಿಸಲು ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆಯು ಬುಧವಾರ ಎರಡು ಮಹತ್ವದ ಒಡಂಬಡಿಕೆ ಮಾಡಿಕೊಂಡಿತು.

ಉನ್ನತ ಶಿಕ್ಷಣ, ಐಟಿ-ಬಿಟಿ ಮತ್ತು ಜೀವನೋಪಾಯ ಸಚಿವ ಡಾ.ಸಿ.ಎನ್.ಅಶ್ವತ್ಥ ನಾರಾಯಣ ಅವರ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇಲಾಖೆಯು ಬೆಂಗಳೂರಿನ ಐಐಎಂ ಮತ್ತು ಸುಭಿಕ್ಷಾ ಸಾವಯವ ಕೃಷಿಕರ ಬಹುರಾಜ್ಯ ಸಹಕಾರ ಸಂಘಗಳ ಜತೆ ಒಡಂಬಡಿಕೆಗಳನ್ನು ವಿನಿಮಯ ಮಾಡಿಕೊಂಡಿತು.

ಇದೇ ಸಂದರ್ಭದಲ್ಲಿ ಸಚಿವರು, ಕೌಶಲ್ಯಾಭಿವೃದ್ಧಿ ಇಲಾಖೆಯ ಸಮಗ್ರ ವೆಬ್ ಪೋರ್ಟಲ್ www.kaushalykar.karnataka.gov.inಗೆ ಚಾಲನೆ ನೀಡಿದರು.

ನಂತರ ಮಾತನಾಡಿದ ಸಚಿವ ಅಶ್ವತ್ಥನಾರಾಯಣ, ಸ್ವಸಹಾಯ ಸಂಘಗಳ ಉದ್ಯಮಶೀಲ ಮಹಿಳೆಯರಿಗೆ ಮಾರುಕಟ್ಟೆ ಮತ್ತಿತರ ಉತ್ತೇಜನ ನೀಡಲು ಐಐಎಂಬಿ ಜತೆಗಿನ ಒಡಂಬಡಿಕೆ 2 ವರ್ಷದ್ದಾಗಿದ್ದು, ಇದರಡಿ 10 ಕೋಟಿ ರುಪಾಯಿ ವೆಚ್ಚದಲ್ಲಿ ಇನ್ಕ್ಯುಬೇಟರ್ ಸೌಲಭ್ಯ ಇರುತ್ತದೆ. ಈ ಮೂಲಕ ಸ್ವಸಹಾಯ ಸಂಘಗಳಲ್ಲಿ ತೊಡಗಿಕೊಂಡಿರುವ ಮಹಿಳೆಯರಿಗೆ ಅಗತ್ಯ ಮಾರ್ಗದರ್ಶನ ಸಿಗಲಿದೆ ಎಂದು ಹೇಳಿದರು.

ಈ ಪರಿಪೋಷಣಾ ಕೇಂದ್ರದ ಮೂಲಕ ಮಹಿಳೆಯರ ನೇತೃತ್ವದ ಸ್ವಸಹಾಯ ಸಂಘಗಳ ಆದಾಯದಲ್ಲಿ ಶೇ.15 ಹೆಚ್ಚಳ ಸಾಧಿಸಲಾಗುವುದು. ಇದಕ್ಕೆ ಅಗತ್ಯವಾದ ವಹಿವಾಟು ಮಾದರಿ, ತರಬೇತಿ, ಗುಣಮಟ್ಟ ನಿಯಂತ್ರಣ, ಗೋದಾಮು ಸೌಲಭ್ಯ ಮತ್ತು ಪೂರೈಕೆ ಸರಪಳಿ ಬಗ್ಗೆ ಅರಿವು ಮೂಡಿಸಿ, ನೆರವು ನೀಡಲಾಗುವುದು. ಕಳೆದ ಎರಡು ವರ್ಷಗಳಲ್ಲಿ ತಲಾ 20, 15 ಮತ್ತು 12 ಲಕ್ಷ ರು. ವಹಿವಾಟು ನಡೆಸಿರುವಂತಹ ಸಂಸ್ಥೆಗಳನ್ನು ಇದಕ್ಕೆ ಆಯ್ಕೆ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು.

ರಾಷ್ಟ್ರೀಯ ಗ್ರಾಮೀಣ ಆರ್ಥಿಕ ಪರಿವರ್ತನೆ ಕಾರ್ಯಕ್ರಮದಡಿ, ಈ ಉದ್ದಿಮೆಗಳಿಗೆ ಅವುಗಳಿಗೆ ಬೇಕಾದ ಬಂಡವಾಳದಲ್ಲಿ ಶೇ. 75ರಷ್ಟನ್ನು 'ಸವಾಲು ಸ್ವೀಕೃತಿ ನಿಧಿ' ರೂಪದಲ್ಲಿ ಒದಗಿಸಿ, ಸುಗಮ ಸಾಲಕ್ಕೂ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದರು.

ಸುಭಿಕ್ಷಾ ಸೊಸೈಟಿ ಜತೆ ಮಾಡಿಕೊಂಡಿರುವ ಒಡಂಬಡಿಕೆಯು, ಸಾವಯವ ಕೃಷಿ ಮಾಡುತ್ತಿರುವ ಮಹಿಳೆಯರು ತಮ್ಮ ಉತ್ಪನ್ನಗಳನ್ನು ನೇರವಾಗಿ ಗ್ರಾಹಕರಿಗೆ ತಲುಪಿಸಲು ನೆರವು ನೀಡಲಿದೆ. ವಹಿವಾಟಿನಲ್ಲಿ ಬರುವ ಹಣವನ್ನು ನೇರವಾಗಿ ಅವರ ಖಾತೆಗೇ ವರ್ಗಾಯಿಸಲಾಗುವುದು. ಜತೆಗೆ, ಉತ್ಪನ್ನಗಳ ಮಾರಾಟಕ್ಕೆ ಚಿಲ್ಲರೆ ಮಳಿಗೆಗಳನ್ನು ತೆರೆಯಲು ಸುಭಿಕ್ಷಾ ಸೊಸೈಟಿ ಸಹಾಯ ಮಾಡಲಿದೆ ಎಂದು ವಿವರಿಸಿದರು.

ಇದರ ಜತೆಗೆ, ಸಾವಯವ ಕೃಷಿ ನಿರತ ಮಹಿಳೆಯರಿಗೆ ಉತ್ಪನ್ನಗಳ ಸಂಸ್ಕರಣೆ, ಉತ್ತಮ ಕೃಷಿ ಪದ್ಧತಿ, ಮಣ್ಣಿನ ಫಲವತ್ತತೆ ಮತ್ತು ತೇವಾಂಶ ರಕ್ಷಣೆಯ ಬಗ್ಗೆ ಅತಿವು ಮೂಡಿಸಿ, ನೆರವು ನೀಡಲಿದೆ ಎಂದುತಿಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಸಾವಯವ ಕೃಷಿ ಮಿಷನ್ ಮುಖ್ಯಸ್ಥ ಎ.ಎಸ್.ಆನಂದ್, ಐಐಎಂಬಿಯ ಪ್ರೊ.ವೆಂಕಟೇಶ್, ಎನ್‌ಆರ್‌ಎಲ್‌ಎಂ ನಿರ್ದೇಶಕಿ ಮಂಜುಶ್ರೀ, ಉದ್ಯೋಗ ಮತ್ತು ತರಬೇತಿ ಇಲಾಖೆ ಆಯುಕ್ತೆ ಜ್ಯೋತಿ, ಕೌಶಲ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅಶ್ವಿನ್ ಗೌಡ, ಜಿಟಿಟಿಸಿ ವ್ಯವಸ್ಥಾಪಕ ನಿರ್ದೇಶಕ ರಾಘವೇಂದ್ರ ಇದ್ದರು.

ಸ್ವಸಹಾಯ ಸಂಘಗಳ ಉದ್ಯಮಶೀಲ ಮಹಿಳೆಯರಿಗೆ ಮಾರುಕಟ್ಟೆ ಮತ್ತಿತರ ಉತ್ತೇಜನ ನೀಡಲು ಮತ್ತು ಸಾವಯವ ಕೃಷಿ ಸಂಬಂಧ ಅರಿವು ಮೂಡಿಸಲು ಸಚಿವವ ಡಾ.ಸಿ.ಎನ್.ಅಶ್ವತ್ಥನಾರಾಯಣ ಸಮ್ಮುಖದಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆಯು ಬುಧವಾರ ಐಐಎಂಬಿ ಮತ್ತು ಸುಭಿಕ್ಷಾ ಸಾವಯವ ಕೃಷಿಕರ ಬಹುರಾಜ್ಯ ಸಹಕಾರ ಸಂಘಗಳ ಜತೆ ಎರಡು ಮಹತ್ವದ ಒಡಂಬಡಿಕೆ ಮಾಡಿಕೊಂಡಿತು.

ಅಗ್ನಿಪಥ ವಿರೋಧಿಸಿ 27ಕ್ಕೆ ದೇಶಾದ್ಯಂತ ಕೈ ಪ್ರತಿಭಟನೆ

ಕೃಷಿ ಕಾಯ್ದೆಯಂತೆ ಅಗ್ನಿಫಥವನ್ನು ಹಿಂತೆಗೆದುಕೊಳ್ಳಬೇಕಾಗುತ್ತದೆ: ರಾಹುಲ್

ದೆಹಲಿ: ಅಲ್ಪಾವಧಿ ಸೇನಾ ನೇಮಕ ಯೋಜನೆ ಅಗ್ನಿಪಥವನ್ನು ವಿರೋಧಿಸಿ ರಾಷ್ಟ್ರದಾದ್ಯಂತ ಜೂನ್ 27ರಂದು ಶಾಂತಿಯುತ ಪ್ರತಿಭಟನೆಗೆ ಕಾಂಗ್ರೆಸ್ ಮುಂದಾಗಿದೆ.

ಈ ಕುರಿತು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರು ಟ್ವೀಟ್ ಮಾಡಿದ್ದಾರೆ. ಕಾಂಗ್ರೆಸ್‌ನ ಶಾಸಕರು, ಸಂಸದರು ಮತ್ತು ಮುಖಂಡರ ನೇತೃತ್ವದಲ್ಲಿ ಆಯಾ ರಾಜ್ಯಗಳಲ್ಲಿ ಸೋಮವಾರ ಶಾಂತಿಯುತ ಸತ್ಯಾಗ್ರಹ ನಡೆಯಲಿದೆ ಎಂದು ತಿಳಿಸಿದ್ದಾರೆ. ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಸತ್ಯಾಗ್ರಹ ನಡೆಯಲಿದೆ ಎಂದಿದ್ದಾರೆ.

ಏತನ್ಮಧ್ಯೆ ಅಗ್ನಿಪಥ ಯೋಜನೆ ಮೂಲಕ ಭಾರತೀಯ ಸೇನೆಯನ್ನು ದುರ್ಬಲಗೊಳಿಸಲಾಗುತ್ತಿದೆ ಎಂದು ಆರೋಪಿಸಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಕೃಷಿ ಕಾಯ್ದೆಗಳನ್ನು ಹಿಂತೆಗೆದುಕೊಂಡಂತೆ ಪ್ರಧಾನಿ ನರೇಂದ್ರ ಮೋದಿ ಅವರು ಈ ಯೋಜನೆಯನ್ನು ವಾಪಸ್ ತೆಗೆದುಕೊಳ್ಳಬೇಕಾಗುತ್ತದೆ ಎಂದಿದ್ದಾರೆ.

'ಪ್ರಧಾನಿ ಮೋದಿ ಕೃಷಿ ಕಾಯ್ದೆಗಳನ್ನು ವಾಪಸ್ ತೆಗೆದುಕೊಳ್ಳಬೇಕಾಗುತ್ತದೆ ಎಂದು ಹೇಳಿದ್ದೆ. ಕೃಷಿ ಕಾಯ್ದೆಗಳನ್ನು ಹಿಂಪಡೆದರು. ಇದೀಗ ಪಿಎಂ ಮೋದಿ 'ಅಗ್ನಿಪಥ' ಯೋಜನೆಯನ್ನು ಹಿಂದಕ್ಕೆ ಪಡೆಯಬೇಕಾಗುತ್ತದೆ ಎಂದು ಕಾಂಗ್ರೆಸ್ ಹೇಳುತ್ತಿದೆ. ಎಲ್ಲ ಯುವಕರು ನಮ್ಮ ಜೊತೆ ನಿಂತಿದ್ದಾರೆ' ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ರಾಷ್ಟ್ರದ ಬಹುದೊಡ್ಡ ಸಮಸ್ಯೆ ಉದ್ಯೋಗ. ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ನಷ್ಟವನ್ನುಂಟು ಮಾಡುವ ಮೂಲಕ ರಾಷ್ಟ್ರದ ಬೆನ್ನು ಮೂಳೆಯನ್ನು ಮುರಿಯಲಾಗಿದೆ. ಎರಡು-ಮೂರು ಜನ ಉದ್ಯಮಿಗಳ ಕೈಗೆ ದೇಶವನ್ನು ಕೊಟ್ಟಿದ್ದಾರೆ. ಕೊನೆಗೆ ಉದ್ಯೋಗದ ಭರವಸೆಯಂತಿದ್ದ ಸೇನೆಯ ಬಾಗಿಲನ್ನು ಮುಚ್ಚಿದ್ದಾರೆ ಎಂದು ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದ್ದಾರೆ.

'ಒಂದು ಶ್ರೇಣಿ, ಒಂದು ಪಿಂಚಣಿ' ಎನ್ನುತ್ತಿದ್ದರು. ಈಗ 'ಶ್ರೇಣಿಯೂ ಇಲ್ಲ, ಪಿಂಚಣಿಯೂ ಇಲ್ಲ' ಎನ್ನುತ್ತಿದ್ದಾರೆ. ಒಂದೆಡೆ ಚೀನಾ ನಮ್ಮ ಭೂಪ್ರದೇಶದ ಮೇಲೆ ಕೂತಿದೆ. ಇಂತಹ ಸಂದರ್ಭದಲ್ಲಿ ಸೇನೆಯನ್ನು ಬಲಪಡಿಸುವ ಬದಲು ದುರ್ಬಲಗೊಳಿಸುತ್ತಿದ್ದಾರೆ ಎಂದು ಮೋದಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾರ್ಯಕರ್ತರಿಗೆ ಧನ್ಯವಾದ

ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿ ಜಾರಿ ನಿರ್ದೇಶನಾಲಯವು ತಮ್ಮನ್ನು ಪ್ರಶ್ನಿಸಿದ ಸಂದರ್ಭ ಬೆಂಬಲಿಸಿದ ಪಕ್ಷದ ಕಾರ್ಯಕರ್ತರಿಗೆ ರಾಹುಲ್ ಗಾಂಧಿ ಇದೇ ಸಂದರ್ಭ ಧನ್ಯವಾದ ಹೇಳಿದ್ದಾರೆ. ಇ.ಡಿ ವಿಚಾರಣೆ ವೇಳೆ ತಾನೊಬ್ಬ ಮಾತ್ರವಲ್ಲ, ಪ್ರಜಾಪ್ರಭುತ್ವಕ್ಕಾಗಿ ಹೋರಾಡುತ್ತಿರುವ ಪ್ರತಿಯೊಬ್ಬರು ತಮ್ಮ ಜೊತೆಗಿದ್ದರು ಎಂದಿದ್ದಾರೆ.

ಮಹಾ ಸರಕಾರ ಅಲುಗಿಸುತ್ತಿರುವ ಆಟೋ ಚಾಲಕ ಏಕನಾಥ ಶಿಂಧೆ!

ಪಕ್ಷ ನಿಷ್ಠ, ಸಂಘಟನಾ ಚತುರ, ಶಿವಸೇನೆ ಪ್ರಭಾವಿ ಮುಖಂಡ

ಸೂರತ್ ಹೋಟೆಲ್‌ನಲ್ಲಿ ಶಿವಸೇನೆ ಶಾಸಕರು.

ಮುಂಬೈ: ಶಿವಸೇನಾ ಮುಖ್ಯಸ್ಥ ಉದ್ಧವ್ ಠಾಕ್ರೆ ನೇತೃತ್ವದ, ಮಹಾರಾಷ್ಟ್ರದ ಮಹಾ ವಿಕಾಸ ಆಘಾಡಿ (ಎಂವಿಎ) ಸರಕಾರವು ಬಿಕ್ಕಟ್ಟಿಗೆ ಸಿಲುಕಲು ಕಾರಣರಾದ ಸಚಿವ ಏಕನಾಥ ಶಿಂಧೆ ಶಿವಸೇನಾದ ಪ್ರಭಾವಿ ಮುಖಂಡ ಎಂಬುದರಲ್ಲಿ ಎರಡು ಮಾತಿಲ್ಲ. ಮೊನ್ನೆ ಮೊನ್ನೆಯವರೆಗೂ ಸ್ವತಃ ಮುಖ್ಯಮಂತ್ರಿ ಉದ್ದವ್ ಠಾಕ್ರೆ ಯಾವುದೇ ಪ್ರಮುಖ ನಿರ್ಧಾರಗಳ, ಸಮಸ್ಯೆಯ ಸಂದರ್ಭದಲ್ಲಿ ಮೊದಲು ಸಂಪರ್ಕಿಸುತ್ತಿದ್ದುದೇ ಈ ಏಕನಾಥ ಶಿಂಧೆಯನ್ನು.

ಥಾಣೆಯಲ್ಲಿ ಆರಂಭದ ದಿನಗಳಲ್ಲಿ ಆಟೋ ರಿಕ್ಷಾ ಚಾಲಕರಾಗಿ ಕೆಲಸ ಮಾಡುತ್ತಿದ್ದ ಏಕನಾಥ ಶಿಂಧೆ, ಶಿವಸೇನಾ ಸೇರಿ, ತಮ್ಮ ಸಂಘಟನಾ ಕೌಶಲದಿಂದ ಪಕ್ಷದಲ್ಲಿ ಹಂತಹಂತವಾಗಿ ಮೇಲೇರಿದರು. ಸಾತಾರಾ ಜಿಲ್ಲೆಯ ಮರಾಠ ಮನೆತನಕ್ಕೆ ಸೇರಿದ ಶಿಂಧೆ ಅವರು ಈಗಿನ ಸರ್ಕಾರದಲ್ಲಿ ನಗರಾಭಿವೃದ್ಧಿ ಸಚಿವರಾಗಿದ್ದಾರೆ.

ಪಕ್ಷ ನಿಷ್ಠ ಹಾಗೂ ಸಂಘಟನಾ ಚತುರ ಎಂಬ ವಿಶೇಷಣಗಳಿಗೆ ಏಕನಾಥ ಶಿಂಧೆ ಸರಿ ಹೊಂದುತ್ತಾರೆ. ಸಮಸ್ಯೆಗಳು ಎದುರಾದಾಗ ಅಥವಾ ಪ್ರಮುಖ ಕೆಲಸಗಳಿದ್ದಾಗ ಉದ್ಧವ್ ಠಾಕ್ರೆ ಅವರು ಮಾಡುವ ಕೆಲವು ಕರೆಗಳಲ್ಲಿ ಒಂದು ಕರೆಯಂತೂ ಶಿಂಧೆ ಅವರಿಗೆ ಹೋಗಿರುತ್ತದೆ.

ಬಾಳಾ ಠಾಕ್ರೆ ಅವರು ಹಿಂದುತ್ವದ ನೆಲೆಗಟ್ಟಿನಲ್ಲಿ ಕಟ್ಟಿದ ಶಿವಸೇನಾವನ್ನು ಇಷ್ಟುಪಟ್ಟು ಸೇರಿದ್ದ ಶಿಂಧೆ, ಮತ್ತೊಬ್ಬ ಮುಖಂಡ ಠಾಣೆಯ ಆನಂದ್ ದಿಘೆ ಅವರ ನೆರಳಿನಲ್ಲಿ ಬೆಳೆದರು. 2001ರಲ್ಲಿ ದಿಘೆ ಸಾವಿನ ಬಳಿಕ ಆ ಭಾಗದಲ್ಲಿ ಪಕ್ಷದ ಸಂಘಟನೆ ಜವಾಬ್ದಾರಿ ವಹಿಸಿಕೊಂಡರು. 1997ರಲ್ಲಿ ಪುರಸಭೆಯ ಚುನಾವಣೆಯಲ್ಲಿ ಗೆದ್ದ ಅವರು 2004ರಲ್ಲಿ ಮೊದಲ ಬಾರಿಗೆ ವಿಧಾನಸಭೆ ಪ್ರವೇಶಿಸಿದರು. ಈಗ ನಾಲ್ಕನೇ ಬಾರಿ ಶಾಸಕರಾಗಿದ್ದಾರೆ. ವಿಧಾನಸಭೆಯ ಪ್ರತಿಪಕ್ಷದ ನಾಯಕರಾಗಿ ಕೆಲ ಸಮಯ ಕೆಲಸ ಮಾಡಿದ್ದಾರೆ. ಇವರ ಪುತ್ರ ಡಾ. ಶ್ರೀಕಾಂತ್ ಶಿಂಧೆ ಅವರು ಲೋಕಸಭಾ ಸದಸ್ಯರಾಗಿದ್ದಾರೆ.

ರಾಹುಲ್ ಗಾಂಧಿ ವಿಚಾರಣೆ ಪೂರ್ಣ

ದೆಹಲಿ: ನ್ಯಾಷನಲ್ ಹೆರಾಲ್ಡ್ ಅಕ್ರಮ ಹಣ ವರ್ಗಾವಣೆ ಪ್ರಕರಣ ಸಂಬಂಧ ಮಂಗಳವಾರ 11 ಗಂಟೆಗಳ ಕಾಲ ವಿಚಾರಣೆ ಎದುರಿಸಿದ ರಾಹುಲ್ ಗಾಂಧಿ ಅವರಿಗೆ ಮತ್ತೆ ವಿಚಾರಣೆಗೆ ಹಾಜರಾಗುವಂತೆ ಜಾರಿ ನಿರ್ದೇಶನಾಲಯ (ಇ.ಡಿ) ಹೊಸ ಸಮನ್ಸ್ ನೀಡಿಲ್ಲ. ಹೀಗಾಗಿ ರಾಹುಲ್ ಅವರ ವಿಚಾರಣೆ ಮುಕ್ತಾಯವಾದಂತಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿ ರಾಹುಲ್ ಅವರು ಒಟ್ಟಾರೆ ಐದು ದಿನಗಳಲ್ಲಿ 54 ಗಂಟೆಗಳ ವಿಚಾರಣೆ ಎದುರಿಸಿದ್ದಾರೆ.

ಬೈಡನ್ ಸಲಹೆಗಾರ್ತಿ ಹುದ್ದೆಗೆ ಡಾ. ಆರತಿ

ವಾಷಿಂಗ್ಟನ್: ಭಾರತ ಮೂಲದ ವಿಜ್ಞಾನಿ ಡಾ. ಆರತಿ ಪ್ರಭಾಕರ್ ಅವರನ್ನು ಅಮೆರಿಕ ಅಧ್ಯಕ್ಷರ ಹಿರಿಯ ವೈಜ್ಞಾನಿಕ ಸಲಹೆಗಾರರಾಗಿ ಅಧ್ಯಕ್ಷ ಜೋ ಬೈಡನ್ ನಾಮ ನಿರ್ದೇಶನ ಮಾಡಿದ್ದಾರೆ. ಇದು ಭಾರತೀಯ-ಅಮೆರಿಕ ಸಮುದಾಯಕ್ಕೆ ಐತಿಹಾಸಿಕ ಕ್ಷಣ ಎಂದು ಬಣ್ಣಿಸಲಾಗಿದೆ.

ಈ ನಾಮನಿರ್ದೇಶನ ಅಮೆರಿಕದ ಸೆನೆಟ್‌ನಿಂದ ಖಚಿತವಾದರೆ ಆರತಿ ಪ್ರಭಾಕರ್ ಅವರು ವಿಜ್ಞಾನ ಮತ್ತು ತಂತ್ರಜ್ಞಾನ ನೀತಿಯ ಕಚೇರಿಯ ಮುಖ್ಯ ನಿರ್ದೇಶಕರಾಗಿ ನೇಮಕವಾದ ಮೊದಲ ಮಹಿಳೆ, ಮೊದಲ ವಲಸಿಗರು ಎಂಬ ಕೀರ್ತಿಗೆ ಭಾಜನರಾಗಲಿದ್ದಾರೆ.

ಮುರ್ಮುಗೆ ಝಡ್+ ಭದ್ರತೆ

ದೆಹಲಿ: ರಾಷ್ಟ್ರಪತಿ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿಯಾಗಿ ಆಯ್ಕೆಯಾಗಿರುವ ದ್ರೌಪದಿ ಮುರ್ಮು ಅವರಿಗೆ ಕೇಂದ್ರ ಸರಕಾರ ಬುಧವಾರದಿಂದ ಅನ್ವಯವಾಗುವಂತೆ ಝಡ್ ಪ್ಲಸ್ ಶ್ರೇಣಿಯ ಭದ್ರತೆ ಒದಗಿಸಿದೆ ಎಂದು ವರದಿಯಾಗಿದೆ.

ಕೇಂದ್ರ ಸರಕಾರವು ದ್ರೌಪದಿ ಮುರ್ಮುಗೆ ಕೇಂದ್ರ ಮೀಸಲು ಪೊಲೀಸ್ ಪಡೆಗಳಿಂದ (ಸಿಆರ್‌ಪಿಎಫ್) ಝಡ್ ಪ್ಲಸ್ ಶ್ರೇಣಿಯ ಭದ್ರತೆ ಒದಗಿಸಿದೆ. ಬುಧವಾರದಿಂದಲೇ ಇದು ಜಾರಿಗೆ ಬರಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಮೆರಿಕದಲ್ಲಿ ಭಾರತೀಯನ ಹತ್ಯೆ

ಹೈದರಾಬಾದ್: ತೆಲಂಗಾಣದ ನಲ್ಗೊಂಡ ಜಿಲ್ಲೆಯ ಸಾಫ್ಟ್‌ವೇರ್ ಉದ್ಯೋಗಿ ಸಾಯಿ ಚರಣ್ ನಕ್ಕ (25) ಅವರನ್ನು ಭಾನುವಾರ ಸಂಜೆ ಅಮೆರಿಕದ ಮೇರಿಲ್ಯಾಂಡ್ ರಾಜ್ಯದಲ್ಲಿ ಗುಂಡಿಕ್ಕಿ ಹತ್ಯೆ ಮಾಡಲಾಗಿದೆ.

ಕ್ಯಾಟನ್ಸ್ವಿಲ್ಲೆ ಬಳಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಸಾಯಿ ಚರಣ್ ಅವರನ್ನು ಕಪ್ಪು ವ್ಯಕ್ತಿಯೊಬ್ಬ ಗುಂಡಿಕ್ಕಿ ಹತ್ಯೆ ಮಾಡಿದ್ದಾನೆ. ತನ್ನ ಸ್ನೇಹಿತನನ್ನು ವಿಮಾನ ನಿಲ್ದಾಣದಲ್ಲಿ ಇಳಿಸಿ ಹಿಂತಿರುಗುತ್ತಿದ್ದ ವೇಳೆ ಘಟನೆ ನಡೆದಿದೆ.

ಕೂಡಲೇ ಅವರನ್ನು ಮೇರಿಲ್ಯಾಂಡ್ ವಿಶ್ವವಿದ್ಯಾಲಯದ ಆರ್. ಆಡಮ್ಸ್ ಕೌಲಿ ಶಾಕ್ ಟ್ರಾಮಾ ಸೆಂಟರ್‌ಗೆ ಸ್ಥಳಾಂತರಿಸಲಾಯಿತು, ಆದರೆ ಸ್ವಲ್ಪ ಸಮಯದ ನಂತರ ಸಾವನ್ನಪ್ಪಿದ್ದಾರೆ ಎಂದು ಘೋಷಿಸಲಾಯಿತು. ವೈದ್ಯರು ಅವರ ತಲೆಯ ಮೇಲೆ ಗುಂಡೇಟಿನಿಂದ ಗಾಯವಾಗಿತ್ತು. ನಲ್ಗೊಂಡದ ನಿವೃತ್ತ ಶಿಕ್ಷಕ ನರಸಿಂಹ ಅವರ ಪುತ್ರ ಚರಣ್ ಕಳೆದ ಎರಡು ವರ್ಷಗಳಿಂದ ಬಾಲ್ಟಿಮೋರ್ ನಗರದ ಸಸಾಫ್ಟ್‌ವೇರ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು.

3,000 ಕೆಜಿ ತೂಕದವರೆಗೆ ಬೆಳೆಯಬಲ್ಲ ಅಪರೂಪದ ಮೀನು

30 ಮಿಲಿಯನ್ ಮೊಟ್ಟೆ ಇಡುವ ಮೀನು ಬಲೆಗೆ!

ರಾಮನಾಥಪುರ: ರಾಮೇಶ್ವರಂ ಬಳಿಯ ಮನ್ನಾರ್ ಕೊಲ್ಲಿಯಲ್ಲಿ ಮೀನುಗಾರಿಕೆ ನಡೆಸುತ್ತಿದ್ದ ಪಂಬನ್ ಟ್ರಾಲರ್ ಮೀನುಗಾರರ ಬಲೆಗೆ ಅಪರೂಪದ ಪ್ರಭೇದದ ಸೂರ್ಯ ಮೀನು ಸಿಕ್ಕಿಬಿದ್ದಿದೆ. ಸಂಶೋಧಕರ ಪ್ರಕಾರ ಈ ಮೀನುಗಳು 3,000 ಕೆ.ಜಿ ವರೆಗೆ ತೂಗುತ್ತವೆ ಮತ್ತು 30 ಮಿಲಿಯನ್ ಮೊಟ್ಟೆಗಳನ್ನು ಇಡುತ್ತವೆ.

ಮನ್ನಾರ್ ಕೊಲ್ಲಿಯು 104 ಜಾತಿಯ ಹವಳದ ಬಂಡೆಗಳು, 147 ಜಾತಿಯ ಕಡಲಕಳೆ, ಸಮುದ್ರ ಹುಲ್ಲುಗಳು, ಸಮುದ್ರ ಶಂಕುಗಳು, ಸಮುದ್ರ ಆಮೆ, ಸಮುದ್ರ ಕುದುರೆ, ಡಾಲ್ಫಿನ್, ಅಳಿಲು, ಮಚ್ಚೆಯುಳ್ಳ ಸ್ಕ್ವಿಡ್ ಮತ್ತು ಸೂರ್ಯ ಮೀನುಗಳಿಗೆ ನೆಲೆಯಾಗಿದೆ. ಅಪರೂಪದ ಜಾತಿಯ ಸನ್ ಫಿಶ್ ಕೂಡ ಇಲ್ಲಿ ವಾಸಿಸುತ್ತವೆ. ಆದರೆ ಇವು ಸಿಗುವುದು ಬಹಳ ಅಪರೂಪ. ಈ ಸಂದರ್ಭದಲ್ಲಿ ರಾಮೇಶ್ವರಂ ಮೀನುಗಾರರ ಬಲೆಗೆ ಅಪರೂಪದ ಪ್ರಭೇದದ ಸೂರ್ಯ ಮೀನು ಸಿಕ್ಕಿಬಿದ್ದಿದೆ. ಇದು ಜನರಿಗೆ ಆಶ್ಚರ್ಯ ಮೂಡಿಸಿದೆ.

55 ಕೆ.ಜಿ ತೂಗುತ್ತಿತ್ತು: ನಮ್ಮ ಪಂಬನ್ ಸಮುದ್ರ ಪ್ರದೇಶದಲ್ಲಿ ಸಿಗುವುದು ಬಹಳ ಅಪರೂಪದ ಮೀನು ಇದಾಗಿದೆ. ಈ ರೀತಿಯ ಮೀನುಗಳು 200 ಮೀಟರ್‌ನಿಂದ 600 ಮೀಟರ್ ಆಳದಲ್ಲಿ ಬದುಕಬಲ್ಲವು ಮತ್ತು ಗಂಟೆಗೆ 3.2 ಕಿಲೋಮೀಟರ್ ವೇಗದಲ್ಲಿ ದಿನಕ್ಕೆ 26 ಕಿಲೋಮೀಟರ್‌ಗಳವರೆಗೆ ಈಜಬಲ್ಲವು. ಈ ಮೀನುಗಳು ಒಂದು ಬಾರಿಗೆ 30 ಕೋಟಿ ಮೊಟ್ಟೆಗಳನ್ನು ಇಡುತ್ತವೆ. ಪಂಬನ್ ಮೀನುಗಾರರು ಹಿಡಿಯುವ ಸನ್ ಮೀನಿನ ತೂಕ 55 ಕೆ.ಜಿ. ಇರುತ್ತದೆ ಎನ್ನುತ್ತಾರೆ ವಿಜ್ಞಾನಿಗಳು.

ಮುಗಿಬಿದ್ದ ಜನ: ನಾಲ್ಕು ವರ್ಷಗಳ ನಂತರ, ಪಂಬನ್ ಮೀನುಗಾರರು ತಮ್ಮ ಬಲೆಗಳಲ್ಲಿ ಸನ್ ಫಿಶ್ ಅನ್ನು ಹಿಡಿದಿದ್ದಾರೆ ಎಂದು ಕೇಂದ್ರ ಸಮುದ್ರ ಮೀನು ಸಂಶೋಧನಾ ವಿಜ್ಞಾನಿಗಳು ತಿಳಿಸಿದ್ದಾರೆ. ಪಂಬನ್ ಟ್ರಾಲರ್ ಮೀನುಗಾರಿಕಾ ಬಲೆಯಲ್ಲಿ ಸಿಕ್ಕಿಬಿದ್ದ ಅಪರೂಪದ ಜಾತಿಯ ಸನ್ ಫಿಶ್‌ಗಳನ್ನು ಸಾರ್ವಜನಿಕರು ಹಾಗೂ ಮೀನು ವ್ಯಾಪಾರಿಗಳು ಕುತೂಹಲದಿಂದ ವೀಕ್ಷಿಸಿದರು.

ಏನಿದು ಸೂರ್ಯ ಮೀನು?

ಪಂಬನ್ ದಕ್ಷಿಣ ಮೀನುಗಾರಿಕಾ ಬಂದರಿನಿಂದ ಮನ್ನಾರ್ ಕೊಲ್ಲಿಯಲ್ಲಿ ಮೀನುಗಾರಿಕೆಗೆ ತೆರಳಿದ್ದ ಮೀನುಗಾರರ ಬಲೆಗೆ ಸನ್ ಫಿಶ್ ಸಿಕ್ಕಿಬಿದ್ದಿದೆ. ಈ ಸನ್‌ಫಿಶ್ ಸಣ್ಣ ಬಾಯಿ, ಪ್ಯಾಡಲ್ ತರಹದ ದೇಹದ ಬಾಲವಿಲ್ಲದೆ ಕಂಡುಬರುತ್ತದೆ. ಪಂಬನ್ ಬಂದರಿಗೆ ಆಗಮಿಸಿದ ಈ ಅಪರೂಪದ ಸೌರ ಮೀನುಗಳನ್ನು ಮೆಡಿಟರೇನಿಯನ್ ವಿಜ್ಞಾನಿಗಳು ಅಧ್ಯಯನ ಮಾಡಿದರು, ಅವರು ಮೀನಿನ ಉದ್ದ, ಅಗಲ ಮತ್ತು ತೂಕವನ್ನು ಪರಿಶೀಲಿಸಿದ್ದಾರೆ. ಗರಿಷ್ಠ 4 ಮತ್ತು ಒಂದೂವರೆ ಅಡಿ ಉದ್ದ ಮತ್ತು 3,000 ಕೆಜಿ ತೂಕದವರೆಗೆ ಬೆಳೆಯುತ್ತದೆ. ಈ ರೀತಿಯ ಮೀನುಗಳು ಸೀಗಡಿ, ಏಡಿ, ಆಮೆಗಳು ಮತ್ತು ಜೆಲ್ಲಿ ಮೀನುಗಳನ್ನು ತಿನ್ನುತ್ತವೆ. ಕೆನಡಾ, ಕೊಲಂಬಿಯಾ, ಪೂರ್ವ ಪೆಸಿಫಿಕ್ ಮಹಾಸಾಗರ, ದಕ್ಷಿಣ ಆಫ್ರಿಕಾ, ಅರ್ಜೆಂಟೀನಾ, ಚಿಲಿ ಮತ್ತು ಪೆರು ಸಮುದ್ರಗಳಲ್ಲಿ ಈ ಜಾತಿಗಳು ಕಂಡುಬರುತ್ತವೆ.

ಅವರು ಈ ಮೀನನ್ನು ತಿನ್ನಲು ಸಾಧ್ಯವಿಲ್ಲ ಬಯಸುವುದಿಲ್ಲ ಎಂದು ಹೇಳಿದ್ದಾರೆ.

ಎನ್ನೆಸ್ಸೆಸ್ ಪಾತ್ರ ಹಿರಿದು: ಸಚಿವ ನಾರಾಯಣಗೌಡ

ಬೆಂಗಳೂರು: ರಾಜ್ಯದಲ್ಲಿ 56 ವಿಶ್ವವಿದ್ಯಾಲಯ ಕಾಲೇಜು ಹಾಗೂ 4 ನಿರ್ದೇಶನಾಲಯಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಅನುಷ್ಠಾನಗೊಳ್ಳುತ್ತಿದ್ದು, ರಾಜ್ಯದಲ್ಲಿ 5 ಲಕ್ಷ ಸ್ವಯಂ ಸೇವಕ-ಸೇವಕಿಯರು ನೋಂದಾಯಿಸಿಕೊಂಡಿದ್ದಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಚಿವ ಡಾ.ಕೆ.ಸಿ.ನಾರಾಯಣಗೌಡ ಹೇಳಿದ್ದಾರೆ.

ಕರ್ನಾಟಕ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಬೆಂಗಳೂರು ಇವರ ವತಿಯಿಂದ ಆಯೋಜಿಸಿದ್ದ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿ, 2021-22ರ ರಾಷ್ಟ್ರೀಯ ಸೇವಾ ಯೋಜನೆಯ ಚಟುವಟಿಕೆಗಳ ಕುರಿತು 2022-23 ರ ಸಲಹಾ ಸಮಿತಿಯಲ್ಲಿ ಗಾಂಧೀಜಿಯವರ ತತ್ವಗಳನ್ನು ಪಾಲಿಸುತ್ತಾ ಎನ್‌ಎಸ್‌ಎಸ್ ಅಭಿವೃದ್ಧಿಯಲ್ಲಿ ಕರ್ನಾಟಕವು ಭಾರತದಲ್ಲೇ ಒಂದನೇ ಸ್ಥಾನಕ್ಕೆ ತಲುಪಿದೆ. ಎನ್‌ಎಸ್‌ಎಸ್ ಇನ್ನಷ್ಟು ಸೇವೆಗಳ ಮೂಲಕ ಅಭಿವೃದ್ಧಿಯತ್ತ ಸಾಗಲಿ ಎಂದು ಆಶಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಆಯುಕ್ತ ಗೋಪಾಲಕೃಷ್ಣ, ರಾಜ್ಯ ಎನ್‌ಎಸ್‌ಎಸ್ ಅಧಿಕಾರಿ ಪ್ರತಾಪ್ ಲಿಂಗಯ್ಯ, ಪ್ರಾಂತೀಯ ಕೇಂದ್ರದ ನಿರ್ದೇಶಕ ಖಾದ್ರಿ ನರಸಿಂಹಯ್ಯ ಮತ್ತಿತರರಿದ್ದರು.